# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 39(05)
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 04–12–2023
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಪದವಿಪೂರ್ವ ಶಿಕ್ಷಣ ಇಲಾಖೆಯ ಜಿಲ್ಲೆ ಉಪ ನಿರ್ದೇಶಕರ ಕಛೇರಿಯ ಮೇಲ್ವಿಚಾರಣೆಯನ್ನು ಜಿಲ್ಲಾ ಪಂಚಾಯತಿ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ವಹಿಸಲು ಸರ್ಕಾರ ಸುತ್ತೋಲೆ ಹೊರಡಿಸಲಾಗಿದೆಯೇ: | ಹೌದು,<br><br>ಸರ್ಕಾರದ ಸುತ್ತೋಲೆ ಸಂಖ್ಯೆ:ಇಪಿ 67 ಟಿಪಿಯು 2023 ದಿನಾಂಕ:18–10–2023ರಲ್ಲಿ ಹೊರಡಿಸಲಾಗಿದೆ. / |
| ಆ) | ಇದರಿಂದಾಗಿ ಹೊರಡಿಸಿದ್ದಲ್ಲಿ ಆಡಳಿತ ನಿರ್ವಹಣೆಯಲ್ಲಿ ವಿಳಂಬ ಮತ್ತು ಗುಣಾತ್ಮಕ ಶಿಕ್ಷಣಕ್ಕೆ ಅಡ್ಡಿ ಉಂಟಾಗಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಸದರಿ ಸುತ್ತೋಲೆಯನ್ನು ಹಿಂಪಡೆಯಲು ಸರ್ಕಾರ ಚಿಂತಿಸುವುದೇ: | ಸದರಿ ಸುತ್ತೋಲೆಯಿಂದ ಆಡಳಿತ ನಿರ್ವಹಣೆಯಲ್ಲಿ ಯಾವುದೇ ವಿಳಂಬ ಮತ್ತು ಗುಣಾತ್ಮಕ ಶಿಕ್ಷಣಕ್ಕೆ ಅಡ್ಡಿ ಉಂಟಾಗುವುದಿಲ್ಲ. |
| ಇ) | ಮುಂದಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಪರೀಕ್ಷಾ ಕೇಂದ್ರಗಳನ್ನು ಪ್ರತಿ ತಾಲ್ಲೂಕಿನಲ್ಲಿ ಗಣನೀಯಾಗಿ ಕಡಿಮೆ ಮಾಡಿ, ಪ್ರೌಢಶಾಲೆಯ ಶಿಕ್ಷಕರನ್ನು ಪರೀಕ್ಷಾ ಕಾರ್ಯದಿಂದ ಹೊರಗಿಟ್ಟು ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿ/ ಅಧಿಕಾರಿಗಳಿಂದ ಪರೀಕ್ಷಾ ಕಾರ್ಯ ನಿರ್ವಹಿಸಲು ಸರ್ಕಾರ ಮುಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಪರೀಕ್ಷಾ ಕೇಂದ್ರಗಳನ್ನು ರಚಿಸಿ ಮಂಡಲಿಗೆ ಸಲ್ಲಿಸುವಂತೆ ಜಿಲ್ಲಾ ಉಪ ನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆರವರಿಗೆ ಸೂಚನೆ ನೀಡಲಾಗಿದ್ದು, ಅದರಂತೆ ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರುಗಳು ಪಟ್ಟಿಯನ್ನು ಮಂಡಲಿಗೆ ಸಲ್ಲಿಸಿರುತ್ತಾರೆ. ಈ ಕುರಿತಂತೆ ಮಂಡಲಿ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ.<br><br>ವಿದ್ಯಾರ್ಥಿಗಳಿಗೆ ಯಾವುದೇ ಅನಾನುಕೂಲತೆ ಉಂಟಾಗದಂತೆ ಕ್ರಮವಹಿಸಲಾಗುವುದನ್ನು ಖಚಿತಪಡಿಸಿಕೊಳ್ಳಲು ಮಂಡಲಿಯು ಶ್ರಮಿಸುತ್ತಿದೆ. |
| ಈ) | ಇದರಿಂದ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ತೊಂದರೆ ಹಾಗೂ ಶಿಕ್ಷಕರನ್ನು ಸಂಶಯದಿಂದ ನೋಡುವುದು ಹಾಗೂ ಅವರ ಮನೋಸ್ಥೈರ್ಯವನ್ನು ಕುಗ್ಗಿಸಿದಂತಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗುವುದು.<br><br>ಶಿಕ್ಷಕರನ್ನು ಸಂಶಯದಿಂದ ನೋಡುವುದು ಹಾಗೂ ಅವರ ಮನೋಸ್ಥೈರ್ಯವನ್ನು ಕುಗ್ಗಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ. |

| | | |
|---|---|---|
| ಉ) | ಬಂದಿದ್ದಲ್ಲಿ ಅವೈಜ್ಞಾನಿಕ ಬದಲಾಣೆಯನ್ನು ಕೈಬಿಟ್ಟು ಈ ಹಿಂದಿನಂತೆ ಪರೀಕ್ಷಾ ಕಾರ್ಯಗಳನ್ನು ಸುಗಮವಾಗಿ ನಡೆಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಪರೀಕ್ಷೆಯನ್ನು ವ್ಯವಸ್ಥಿತವಾಗಿ ನಡೆಸಲು ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: ಇಪಿ 201 ಡಿಜಿಡಬ್ಲ್ಯೂ 2023**

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು